ಬಸ್‌ಗಳ ಸಂಚಾರಕ್ಕೆ ಅನುಮತಿ ನೀಡುವುದು

3813(1036); ಶ್ರೀ ಬಾಲಕೃಷ್ಣ ಹೆಚ್.ಸಿ (ಮಾಗಡಿ)

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯ ಹಲವಾರು ಮಾರ್ಗಗಳಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳನ್ನು ಚಲಿಸಲು ಅನುಮತಿ ಕೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಾದರೆ, ಮಾಗಡಿ ಕ್ಷೇತ್ರ ವ್ಯಾಪ್ತಿಯ ಯಾವ ಯಾವ ಮಾರ್ಗಗಳಲ್ಲಿ ಬಸ್ಸುಗಳನ್ನು ಚಲಿಸಲು ಅನುಮತಿ ಕೋರಿ ಪ್ರಸ್ತಾವನೆಗಳು ಬಂದಿರುತ್ತವೆ;

ಇ) ಹಾಗಿದ್ದರೆ, ಎಷ್ಟು ಮಾರ್ಗಗಳಿಗೆ ಈಗಾಗಲೇ ಅನುಮತಿ ನೀಡಲಾಗಿದೆ; ಇನ್ನು ಎಷ್ಟು ಮಾರ್ಗಗಳಿಗೆ ಅನುಮತಿ ನೀಡಬೇಕಾಗಿದೆ;

ಈ) ಹಾಗಾದರೆ, ಯಾವ ಕಾಲಮಿತಿಯಲ್ಲಿ ಬಸ್ಸುಗಳನ್ನು ಚಲಿಸಲು ಅನುಮತಿ ನೀಡಲಾಗುವುದು?

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು)

ಅ) ಮತ್ತು ಆ) ಮಾಗಡಿ ಕ್ಷೇತ್ರ ವ್ಯಾಪ್ತಿಯ ವಿವಿಧ ಮಾರ್ಗಗಳಲ್ಲಿ ಬಸ್ಸುಗಳನ್ನು ಕಾರ್ಯಚರಣೆ ಮಾಡಲು ಪರವಾನಗಿ ಕೋರಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ರಾಮನಗರರವರಲ್ಲಿ ಸಲ್ಲಿಸಿರುವ ಪ್ರಸ್ತಾವನೆಗಳ ವಿವರಗಳನ್ನು ಅನುಬಂಧ "ಅ" ನಲ್ಲಿ ಇರಿಸಲಾಗಿದೆ.

ಇ) ಮತ್ತು ಈ) ಮಾಗಡಿ ಕ್ಷೇತ್ರ ವ್ಯಾಪ್ತಿಯ 41 ಮಾರ್ಗಗಳಲ್ಲಿ ಬಸ್ಸುಗಳನ್ನು ಕಾರ್ಯಚರಣೆ ಮಾಡಲು ಪರವಾನಗಿ ಕೋರಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ರಾಮನಗರರವರಲ್ಲಿ ಅರ್ಜಿ ಸಲ್ಲಿಸಲಾಗಿತ್ತು. ಇದರಲ್ಲಿ ದಿನಾಂಕ: 07/12/2013 & 11/02/2014ರ ಪ್ರಾಧಿಕಾರ ಸಭೆಯಲ್ಲಿ 31 ಮಾರ್ಗಗಳಿಗೆ ಈಗಾಗಲೇ ಪರವಾನಗಿ ಮಂಜೂರು ಮಾಡಿದ್ದು, ವೇಳೆ ನಿಗದಿಗಾಗಿ ಇನ್ನೂ ಸಭೆ ಕರೆದಿರುವುದಿಲ್ಲ. ಉಳಿದ ಇನ್ನು 10 ಮಾರ್ಗಗಳ ಜಂಟಿ ಮಾರ್ಗ ಸಮೀಕ್ಷೆ (ಜಾಯಿಂಟ್ ರೂಟ್ ಸರ್ವೇ)

ಮಾಡದೇ ಇರುವುದರಿಂದ ಪರವಾನಗಿ ಮಂಜೂರು ಮಾಡುವುದು ಬಾಕಿ ಇರುತ್ತದೆ.

ಹೂಗಾರ, ಜೀರ, ಗುರುವ ಜಾರಿ ಜನಾಂಗದವರ ಅಭಿವೃದ್ಧಿ

3815(4610); ಶ್ರೀ ಭೂಸನೂರ ರಮೇಶ್ ಬಾಳಪ್ಪ

ಅ) ರಾಜ್ಯದಲ್ಲಿ ಹೂಗಾರ, ಜೀರ, ಗುರುವ ಜಾತಿಯ ಜನಾಂಗದವರು ಪಾರಂಪರಿಕವಾಗಿ ಅತ್ಯಂತ ಪಾವಿತ್ರ್ಯತೆಯ ಹೂವು ಮಾಲೆ ಕಟ್ಟುವ ಕೆಲಸವನ್ನು ಮಾಡುತ್ತಿದ್ದು, ಅವರು ಆರ್ಥಿಕವಾಗಿ ಬಹಳ ಹಿಂದುಳಿದಿದ್ದಾರೆ. ಅದಕ್ಕಾಗಿ ಆ ಜನಾಂಗದ ಆರ್ಥಿಕ ಬೆಳವಣಿಗೆಗಾಗಿ ಪ್ರಭಲವಾಗಲು ಪ್ರತ್ಯೇಕ ನಿಗಮ ಸ್ಥಾಪಿಸಲು ಅಥವಾ ಅವರ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ಘೋಷಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರಗಳನ್ನು ಒದಗಿಸುವುದು)

ಆ) ಹಾಗಿದ್ದಲ್ಲಿ, ಯಾವಾಗ ಮಾಡಲಾಗುವುದು; (ವಿವರಗಳನ್ನೊದಗಿಸುವುದು)?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಔಷಧಿಗಳ ಕೊರತೆ ಇರುವುದು

3817(4426); ಶ್ರೀ ಡಾ॥ ರಫೀಕ್ ಅಹ್ಮದ್ ಎಸ್ (ತುಮಕೂರು ನಗರ)

ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಕೊರತೆ ನೀಗಿಸಲು ಕೈಗೊಂಡಿರುವ ಕ್ರಮಗಳೇನು;

ಆ) ಔಷಧಿಗಳ ಕೊರತೆಯಿರುವುದಕ್ಕೆ ಕಾರಣಗಳೇನು?